# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ,ಧಾರವಾಡ, ಕಾರವಾರ, ವಿಜಯಪುರ,ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:18/ಸಂಚಿಕೆ:187 RNI NO.KAR KAN/2003/10452:No.G2/PMG/KA/NK/743/18-20 ಗುರುವಾರ ದಿನಾಂಕ:02-07-2020 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com

## ಸೋಂಕಿತರ ಅಂತ್ಯ ಸಂಸ್ಕಾರ ಗೌರವದಿಂದ ಆಗಲಿ ; ಮುಖ್ಯಮಂತ್ರಿ ಯಡಿಯೂರಪ್ಪ

ಬೆಂಗಳೂರು ; ಬಳ್ಳಾರಿಯಲ್ಲಿ ಶಂಕಿತ ಶವಸಂಸ್ಕಾರ



ಸಂದರ್ಭದಲ್ಲಿ ಅಗೌರವದಿಂದ ನಡೆದುಕೊಂಡಿರುವುದು ನೋವಿನ ಸಂಗತಿ ಎಂದು ಬಳ್ಳಾರಿ ಜಿಲ್ಲೆಯಲ್ಲಿ ಕೋವಿಡ್ ಸೋಂಕಿತರ ಅಂತ್ಯ ಸಂಸ್ಕಾರದ ಸಂದರ್ಭದಲ್ಲಿ ಸಿಬ್ಬಂದಿ ನಡವಳಿಕೆ ಅತ್ಯಂತ ಅಮಾನವೀಯ ಹಾಗೂ ತೀವ್ರ ನೋವಿನ ಸಂಗತಿಎಂದು ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಹೇಳಿದ್ದಾರೆ.

ಕೋವಿಡ್ ಸೋಂಕಿತರೊಂದಿಗೆ ಮಾನವೀಯತೆಯಿಂದ ವರ್ತಿಸಿ, ಸೋಂಕಿತರ ಅಂತ್ಯ ಸಂಸ್ಕಾರವನ್ನು ಗೌರವದಿಂದ ನೆರವೇರಿಸಿ ಎಂದು ಕೋವಿಡ್ ನಿರ್ವಹಣೆಗೆ ಸಂಬಂಧಿಸಿದಂತೆ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲ ಸಿಬ್ಬಂದಿಗೆ ವಿನಂತಿಸುತ್ತೇನೆ. ಮಾನವೀಯತೆಯಿಂದ ನಡೆದುಕೊಳ್ಳೋಣ, ಮಾನವೀಯತೆಗಿಂತ ದೊಡ್ಡ ಧರ್ಮ ಯಾವುದೂ ಇಲ್ಲ ಎಂಬುದನ್ನು ಅರಿಯೋಣ ಎಂದು ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಹೇಳಿದ್ದಾರೆ.

ಬಳ್ಳಾರಿಯಲ್ಲಿ ಸೋಂಕಿತರ ಅಮಾನವೀಯ ರೀತಿಯಲ್ಲಿ ಅವಮಾನಕರ ರೀತಿಯಲ್ಲಿ ಅಂತ್ಯಸಂಸ್ಕಾರ ನಡೆಸಿದ ಘಟನೆ ವರದಿಯಾದ ಬೆನ್ನಲ್ಲಿಯೇ ರಾಜ್ಯದ ಯಾದಗಿರಿ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿಯೂ ಇದೇ ರೀತಿಯ ನಡವಳಿಕೆ ಶಂಕಿತರ ಶವಗಳೊಂದಿಗೆ ನಡೆದಿದೆ ಎಂಬುದು ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ . ಆಗಿರುವ ಘಟನೆಯನ್ನು ತೀವ್ರವಾಗಿ ಖಂಡಿಸಿರುವ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಸೋಂಕಿನಿಂದ ಸಾವಿಗೀಡಾದವರ ಶವಗಳೊಂದಿಗೆ ಅಂತಿಮ ಸಂಸ್ಕಾರ ನಡೆಸುವಾಗ ಗೌರವದಿಂದ ನಡೆದುಕೊಳ್ಳಬೇಕು ಇದು ಅತ್ಯಂತ ವಿಷಾದನೀಯ ಘಟನೆ ಎಂದು ಹೇಳಿದ್ದಾರೆ .



# ತಾಯಿಯಿಂದ ಜನ್ಮ, ವೈದ್ಯರಿಂದ ಪುನರ್ಜನ್ಮ’

## ಪ್ರಧಾನಿ ಮೋದಿ ವರ್ಣನೆ

ನವದೆಹಲಿ, ಜು.1– ಇಂದು ವೈದ್ಯರ ದಿನ ಮತ್ತು ಲೆಕ್ಕಪರಿಶೋಧಕರ ದಿನ. ಈ ಸಂದರ್ಭದಲ್ಲಿ ಪ್ರಧಾನ ನರೇಂದ್ರ ಮೋದಿ ಆರೋಗ್ಯ ರಕ್ಷಕರು ಮತ್ತು ಚಾರ್ಟೆರ್ಡ್ ಅಕೌಂಟೆಂಟ್‌ಗಳ ಪಾತ್ರವನ್ನು ಶ್ಲಾಘಿಸಿ ಅವರ ಸೇವೆಯನ್ನು ಪ್ರಶಂಶಿಸಿದ್ದಾರೆ.

ಡಾಕ್ಟರ್ಸ್ ಡೇ ಸಂದರ್ಭದಲ್ಲಿ ವೈದ್ಯರ ಕಾರ್ಯ ಮತ್ತು ಕರ್ತವ್ಯ ತತ್ಪರತೆಯನ್ನು ಟ್ವೀಟರ್‌ನಲ್ಲಿ ಗುಣಗಾನ ಮಾಡಿರುವ ಮೋದಿ, ಕೋವಿಡ್ 19 ಪಿಡುಗಿನ ವಿರುದ್ಧ ಹೋರಾಡುತ್ತಿರುವ ವೈದ್ಯರು ತಮ್ಮ ಜೀವವನ್ನೇ ಅಪಾಯಕ್ಕೊಡ್ಡಿ ಜನರ ಜೀವವನ್ನು ರಕ್ಷಿಸುತ್ತಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದ್ದಾರೆ.

ಕೊರೊನಾ ವೈರಸ್ ವಿರುದ್ಧ ಹೋರಾಟದಲ್ಲಿ ಮುಂಚೂಣಿಯಲ್ಲಿರುವ ವೈದ್ಯರ ಸೇವೆ ಶ್ಲಾಘನೀಯ. ಅವರಿಗೆ ಭಾರತವು ಸಲ್ಯೂಟ್ ಮಾಡುತ್ತದೆ ಎಂದು ಅವರು ಹೇಳಿದ್ದಾರೆ. ಕಿರು ವಿಡಿಯೋದಲ್ಲಿ ಮಾತನಾಡಿರುವ ಮೋದಿ, ತಾಯಿ ಜನ್ಮ ನೀಡಿದರೆ, ವೈದರು ಪುರ್ನಜನ್ಮ ನೀಡುತ್ತಾರೆ ಎಂದು ವ್ಯಾಖ್ಯಾನಸಿದ್ದಾರೆ ಖ್ಯಾತ ವೈದ್ಯ ಬಿ.ಸಿ.ರಾಯ್ ಅವರ ಜನ್ಮದಿನವನ್ನು ವೈದ್ಯರ ದಿನವನ್ನಾಗಿ ಅಚರಿಸಲಾಗುತ್ತದೆ.ಜುಲೈ 1ರಂದು ಚಾರ್ಟರ್ಡ್ ಅಕೌಂಟೆಂಟ್‌ಗಳ ದಿನಾಚರಣೆ. ಈ ಸಂದರ್ಭದಲ್ಲಿ ಲೆಕ್ಕಪರಿಶೋಧಕರ ಸಮುದಾಯಕ್ಕೆ ಶುಭ ಕೋರಿರುವ ಪ್ರಧಾನ, ಆರೋಗ್ಯಕರ ಮತ್ತು ಪಾರದರ್ಶಕ ಆರ್ಥಿಕತೆ ರಕ್ಷಣೆಯಲ್ಲಿ ಸಿಎಗಳ ಪಾತ್ರ ಅತ್ಯಂತ ಮಹತ್ವದ್ದು ಎಂದು ಬಣ್ಣಿಸಿದ್ದಾರೆ.

## ಶಿಕ್ಷಕರ ಸಮಸ್ಯೆಗೆ ಸ್ಪಂದಿಸುವಂತೆ ಸಿಎಂಗೆ ದೇವೇಗೌಡರ ಪತ್ರ



ಬೆಂಗಳೂರು, ಜು.1–ಕೋವಿಡ್–19ರ ಹಿನ್ನೆಲೆಯಲ್ಲಿ ಶಿಕ್ಷಕರ ಸಮಸ್ಯೆಗೆ ಸ್ಪಂಧಿಸಿ ಪರಿಹಾರ ನೀಡಬೇಕೆಂದು ಮಾಜಿ ಪ್ರಧಾನ ಹೆಚ್.ಡಿ.ದೇವೇಗೌಡರು ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಿದ್ದಾರೆ. (2ನೇ ಪುಟಕ್ಕೆ )



## ಕಡಿಮೆ ಜ್ವರ ಲಕ್ಷಣಗಳಿದ್ದರೆ ಅವರನ್ನು ಮನೆಯಲ್ಲೇ ಪ್ರತ್ಯೇಕವಾಗಿರಿಸಿ ನಿಗಾ ವಹಿಸಿ: ಸಿಎಂಗೆ ತಜ್ಞ ವೈದ್ಯರ ಸಲಹೆ

ಬೆಂಗಳೂರು: ರೋಗ ಲಕ್ಷಣ ಇಲ್ಲದ ಅಥವಾ ಅತ್ಯಂತ ಕಡಿಮೆ ಜ್ವರದ ಲಕ್ಷಣಗಳಿದ್ದರೆ, ಅವರನ್ನು ಮನೆಯಲ್ಲಿಯೇ ಪ್ರತ್ಯೇಕವಾಗಿರಿಸಿ (ಹೋಮ್ ಐಸೋಲೇಷನ್), ಅವರ ಆರೋಗ್ಯದ ಮೇಲೆ ನಿಗಾ ಇಡಬೇಕು ಎಂದು ತಜ್ಞ ವೈದ್ಯರು ಸಲಹೆ ನೀಡಿದ್ದಾರೆ.

ಕೋವಿಡ್ –19 ನಿರ್ವಹಣೆ ಕುರಿತು ತಜ್ಞ ವೈದ್ಯರೊಂದಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನಡೆಸಿದ ಸಭೆಯಲ್ಲಿ ವೈದ್ಯರು ಈ ಸಲಹೆ ನೀಡಿದ್ದಾರೆ.ಸಭೆಯಲ್ಲಿ ಕೋವಿಡ್ ಚಿಕಿತ್ಸೆಗೆ ಹಾಗೂ ನಿರ್ವಹಣೆಗೆ ಅಳವಡಿಸಬೇಕಾದ ಮಾರ್ಗಸೂಚಿಗಳನ್ನು ನಿಗದಿ ಪಡಿಸುವ ಕುರಿತು ಚರ್ಚಿಸಲಾಯಿತು. ರೋಗ ಲಕ್ಷಣ ಇಲ್ಲದ ಅಥವಾ ಅತ್ಯಂತ ಕಡಿಮೆ ಜ್ವರದ ಲಕ್ಷಣಗಳಿದ್ದರೆ, ಅವರನ್ನು ಮನೆಯಲ್ಲಿಯೇ ಪ್ರತ್ಯೇಕವಾಗಿರಿಸಿ (ಹೋಮ್ ಐಸೋಲೇಷನ್), ಅವರ ಆರೋಗ್ಯದ ಮೇಲೆ ನಿಗಾ ಇಡುವುದು ಸೂಕ್ತ. ಇದರಿಂದ ಆಸ್ಪತ್ರೆಗಳ ಮೇಲೆ ಒತ್ತಡ (2ನೇ ಪುಟಕ್ಕೆ )

# ಪರೀಕ್ಷೆ ಬರೆದಿದ್ದ ವಿದ್ಯಾರ್ಥಿನಿಗೆ ಸೋಂಕು



ಗಂಗಾವತಿ: ತನ್ನ ಸಹಪಾಠಿಗಳೊಂದಿಗೆ ಕಳೆದ ಎರಡು ಪರೀಕ್ಷೆಗಳನ್ನು ಒಟ್ಟಿಗೆ ಬರೆದಿದ್ದ ವಿದ್ಯಾರ್ಥಿನಿಯಲ್ಲಿ ಸೋಂಕು ದೃಢಪಟ್ಟ ಘಟನೆ ಕಾರಟಗಿಯಲ್ಲಿ

## ನೂರಾರು ವಿದ್ಯಾರ್ಥಿ ಪಾಲಕರಲ್ಲಿ ಆತಂಕ

ನಡೆದಿದೆ.ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುತ್ತಿದ್ದ ವಿದ್ಯಾರ್ಥಿನಿಗೆ ಕೊರೋನಾ ಖಚಿತವಾದ ಪರಿಣಾಮ, ಪರೀಕ್ಷೆಯ ಬರೆಯುವುದನ್ನು ಮೊಟಕುಗೊಳಿಸಿ ಚಿಕಿತ್ಸೆಗಾಗಿ ವಿದ್ಯಾರ್ಥಿನಿಯನ್ನು ಆರೋಗ್ಯ ಇಲಾಖೆ ಸಿಬ್ಬಂದಿ ಆಸ್ಪತ್ರೆಗೆ ಕರೆದೊಯ್ದ ಘಟನೆ ನಡೆಯಿತು.ಕೊರೋನಾ ಸೋಂಕಿತ 10 ನೇ ತರಗತಿ ವಿದ್ಯಾರ್ಥಿನಿ ಪರೀಕ್ಷೆಗೆ (2ನೇ ಪುಟಕ್ಕೆ )

## ಡೆಂಗಿ ಅಥವಾ ಚಿಕುಂಗುನ್ಯಾ ಹರಡುವುದನ್ನು ತಡೆಯಲು ಕ್ರಮಕೈಗೊಳ್ಳಿ

ಬೆಳಗಾವಿ, ಜು. 01 : ಡೆಂಗೀ ನಿಯಂತ್ರಣದಲ್ಲಿ ಸಮುದಾಯದ ಪಾತ್ರ ಪ್ರಮುಖವಾಗಿದೆ ಡೆಂಗಿ ಅಥವಾ ಚಿಕುಂಗುನ್ಯಾ ಜ್ವರಗಳ ಬಗ್ಗೆ ಸಮುದಾಯವು ಮುಜಾಗ್ರತ ಕ್ರಮಕೈಗೊಂಡಾಗ ಮಾತ್ರ ಡೆಂಗಿ ಅಥವಾ ಚಿಕುಂಗುನ್ಯಾ ರೋಗ ಹರಡುವುದನ್ನು ತಡೆಯಲು ಸಾದ್ಯ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ರೋಗ ನಿಯಂತ್ರಣದ ಕ್ರಮಗಳು

ಡೆಂಗಿ/ಚಿಕುಂಗುನ್ಯಾ ವೈರಸ್ ನಿಂದ ಉಂಟಾಗುವ ಜ್ವರಗಳು., ರಕ್ತ ಪರೀಕ್ಷೆಯಿಂದ ಮಾತ್ರ ಈ ಜ್ವರಗಳನ್ನು ಪತ್ತೆ ಹಚ್ಚಬಹುದು. ಹಗಲಿನಲ್ಲಿ ಕಚ್ಚುವ ಸೋಂಕಿತ ಈಡೀಸ್ ಸೊಳ್ಳೆಗಳಿಂದ ಜ್ವರ ಒಬ್ಬರಿಂದ ಮತ್ತೊಬ್ಬರಿಗೆ ಹರಡುತ್ತದೆ.ಈಡೀಸ್ ಸೊಳ್ಳೆಗಳು ಮನೆಯಲ್ಲಿನ ಸ್ವಚ್ಛ ನೀರಿನ ಸಂಗ್ರಹಗಳಲ್ಲಿ ಉತ್ಪತ್ತಿಯಾಗುತ್ತವೆ. (2ನೇ ಪುಟಕ್ಕೆ )

## ಕೊಪ್ಪಳ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಸುರಳ್ಕರ್ ವಿಕಾಸ್ ಕಿಶೋರ್ ಅಧಿಕಾರ ಸ್ವೀಕಾರ

ಕೊಪ್ಪಳ ಜು.01: ಕೊಪ್ಪಳ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಸುರಳ್ಕರ್ ವಿಕಾಸ್ ಕಿಶೋರ್ ಅವರು ಬುಧವಾರ(ಜುಲೈ 01) ಅಧಿಕಾರ ಸ್ವೀಕಾರ ಮಾಡಿದರು.

ಅಧಿಕಾರ ಸ್ವೀಕಾರದ ನಂತರ ಜಿಲ್ಲಾಡಳಿತ ಸಭಾಂಗಣದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿ, ನಾನು 2012ನೇ ಸಾಲಿನ ಐಎಎಸ್ ಬ್ಯಾಚಿನ ಅಧಿಕಾರಿಯಾಗಿದ್ದು, ಈ ಹಿಂದೆ ಬೆಂಗಳೂರಿನ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದೇನೆ. ಸರ್ಕಾರದ ಆದೇಶದ ಮೇರೆಗೆ ಕೊಪ್ಪಳ ಜಿಲ್ಲೆಯ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸುವ ಅವಕಾಶ ಒದಗಿ ಬಂದಿದ್ದು, ಇದೇ ಮೊದಲ ಬಾರಿಗೆ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದೇನೆ. ಮೂಲತಃ ಮಹರಾಷ್ಟ್ರದವನಾಗಿದ್ದು, ಈ ಹಿಂದೆ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದೇನೆ ಎಂದು ಹೇಳಿದರು.

ದೇಶದ ಎಲ್ಲೆಡೆ ಕೋವಿಡ್–19 ಸೋಂಕು ಹರಡುತ್ತಿದ್ದು, ಜಿಲ್ಲೆಯಲ್ಲಿ ಕೋವಿಡ್–19 ತಡೆಗಟ್ಟುವುದೇ ನಮ್ಮ ಮುಂದಿರುವ ಮೊದಲ ಗುರಿಯಾಗಿದೆ. ಅದರಂತೆಯೇ ಇಂದು ಕೊಪ್ಪಳ ಜಿಲ್ಲೆಯಲ್ಲಿ 13



ಕೋವಿಡ್–19 ಪ್ರಕರಣಗಳು ದೃಢಪಟ್ಟಿದ್ದು ಅವುಗಳ ಮಾಹಿತಿ ಪಡೆಯಲಾಗಿದೆ. ಸೋಂಕಿತರ ಪ್ರಾಥಮಿಕ ಸಂಪರ್ಕದಲ್ಲಿದ್ದ 17 ಜನರ ಗಂಟಲು ದ್ರವವನ್ನು ಪರೀಕ್ಷೆಗೆ ಒಳಪಡಿಸಲಾಗುತ್ತದೆ. ಕೋವಿಡ್–19 ಕುರಿತು ಜಿಲ್ಲೆಯಲ್ಲಿ ಇನ್ನೂ ಹೆಚ್ಚಿನ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ಹೇಳಿದರು. ಇಂದು ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕಾರಟಗಿ ಪರೀಕ್ಷಾ ಕೇಂದ್ರದಲ್ಲಿ ಒಬ್ಬ ವಿದ್ಯಾರ್ಥಿನಿಗೆ ಕೋವಿಡ್–19 ಸೋಂಕು ದೃಢಪಟ್ಟಿದ್ದು, ಚಿಕಿತ್ಸೆಗೆ ರಾಯಚೂರಿಗೆ ಕಳುಹಿಸಲಾಗಿದೆ. ಈ ಕುರಿತು ಸಂಬಂಧಪಟ್ಟ ಮಾಹಿತಿಯನ್ನು ಅತಿ ಶೀಘ್ರದಲ್ಲೇ ತಿಳಿಸಲಾಗುತ್ತದೆ.

ಜಿಲ್ಲೆಯ ಅಭಿವೃದ್ಧಿಗೆ ಎಲ್ಲಾ ಸಾರ್ವಜನಿಕರ ಮತ್ತು ಎಲ್ಲಾ ಸರ್ಕಾರಿ ಇಲಾಖೆ ಅಧಿಕಾರಿ, ಮಾಧ್ಯಮ ಮಿತ್ರರ ಸಹಾಯ, ಸಹಕಾರ ಅತ್ಯಗತ್ಯ ಎಂದು ಅವರು ಮಾಧ್ಯಮ ಪ್ರತಿನಿಧಿಗಳಿಗೆ ತಿಳಿಸಿದರು. ಈ ಸಂದರ್ಭ ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



ಬೆಳಗಾವಿ ನೂತನ ಜಿಲ್ಲಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ ಜಿಲ್ಲಾಧಿಕಾರಿ ಮಹಾಂತೇಶ ಹೀರೆಮಠ ಅವರಿಗೆ ಕರ್ನಾಟಕ ರಕ್ಷಣಾ ವೇದಿಕೆ (ಸಂತೋಷ ಅರಳಿಕಟ್ಟಿ ಬಣ)ದ ಯುವ ಘಟಕ ರಾಜ್ಯಾಧ್ಯಕ್ಷ ಪ್ರಶಾಂತ ಸಂತೋಷ ಅರಳಿಕಟ್ಟಿ ಅವರು ಇಂದು ಅವರ ಕಚೇರಿಯಲ್ಲಿ ಹೂ –ಗ್ಚುಚ್ ನೀಡಿ ಶುಭಾಶಯ ಕೋರಿದರು.

# ವೈಯಕ್ತಿಕ ಕಾಳಜಿ ವಹಿಸಿ ಚಿಕಿತ್ಸೆ ನೀಡಿ;ಮರಣ ಪ್ರಮಾಣ ಕಡಿಮೆ ಮಾಡಿ: ಸಚಿವ ಆನಂದಸಿಂಗ್

ಬಳ್ಳಾರಿ, ಜೂ.: ವೈದ್ಯರು ಸಲ್ಲಿಸುತ್ತಿರುವ ಸೇವೆ ಅಮೋಘವಾಗಿದೆ. ಸಾವಿನ ಪ್ರಮಾಣ ದಿಢೀರ್ ಏರಿಕೆ ಆದ ಕಾರಣ ಸೋತಿದ್ದೇವೆ ಎಂದು ನಿರಾಶೆಯಾಗುವುದು ಬೇಡ. ತಮ್ಮೆಲ್ಲರ ಜತೆಗೆ ನಾವಿದ್ದೇವೆ;ತಾವು ಕೊರೊನಾ ಸೊಂಕಿನಿಂದ ಆಸ್ಪತ್ರೆಗೆ ದಾಖಲಾಗುವ ಪ್ರತಿ ರೋಗಿಯೊಬ್ಬರ ವೈಯಕ್ತಿಕ ಕಾಳಜಿ ವಹಿಸಿ ಪರಿಣಾಮಕಾರಿ ಚಿಕಿತ್ಸೆ ನೀಡಿ ಮತ್ತು ಆ ಮೂಲಕ ಮರಣ ಪ್ರಮಾಣ ಕಡಿಮೆಗೊಳಿಸಲು ಮುಂದಾಗಬೇಕು ಎಂದು ಅರಣ್ಯ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್.ಆನಂದಸಿಂಗ್ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಸಂಜೆ ನಡೆದ ಕೋವಿಡ್ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರೋಗಿಗಳ ಹತ್ತಿರ ಹಿರಿಯ ವೈದ್ಯರು ಹೋಗಿ ಚಿಕಿತ್ಸೆ ಕೊಡಬೇಕು,ಕಿರಿಯ ವೈದ್ಯರು ಹಾಗೂ ನರ್ಸ್ ಗಳು ಹೋಗಬೇಕು ಎಂದು ಹೇಳಿದ ಅವರು, ಜಿಲ್ಲೆಯಲ್ಲಿ ಸಾವುಗಳು ತಡೆಗಟ್ಟುವ ನಿಟ್ಟಿನಲ್ಲಿ ಇನ್ನೆಷ್ಟು ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸಬೇಕು ಎಂದು ಸೂಚಿಸಿದರು.ಸರಕಾರ ಸೂಚಿಸಿದ ನಿಯಮಾವಳಿಗಳನ್ನು ಕಡ್ಡಾಯವಾಗಿ



ಜಿಲ್ಲೆಯ ಜನರು ಸ್ವಯಂಪ್ರೇರಿತವಾಗಿ ಪಾಲಿಸಬೇಕು:ಅಂದಾಗ ಮಾತ್ರ ಈ ಕೋವಿಡ್ ಹರಡುವುದನ್ನು ತಡೆಗಟ್ಟಲು ಸಾಧ್ಯ ಎಂದರು.

ಸರಕಾರ ಹಾಗೂ ಜಿಲ್ಲಾಡಳಿತ ತಮ್ಮಜೊತೆಗಿದೆ ಯಾವುದೇ ರೀತಿಯ ತೊಂದರೆ,ವ್ಯವಸ್ಥೆ ಲೋಪ,ಹೇಳಿಕೊಳ್ಳಲಾಗದಿದ್ದ ಅಂಶಗಳಿದ್ದರೇ ಮುಕ್ತವಾಗಿ ಹಂಚಿಕೊಳ್ಳಿ;ಕೋವಿಡ್ ಚಿಕಿತ್ಸೆಗೆ ಬೇಕಾದ ಪರಿಕರಗಳು ಹಾಗೂ ಔಷಧಿಗಳು ಇನ್ನೂ ಅಗತ್ಯವಿದ್ದಲ್ಲಿ ಸಮರ್ಪಕವಾಗಿ ಒದಗಿಸಲಾಗುವುದು ಎಂದರು.

880 ಸೊಂಕಿತರು;29ಮರಣ ಬಳ್ಳಾರಿ ಜಿಲ್ಲೆಯಲ್ಲಿ ಇಂದಿನ 107 ಕೊರೊನಾ ಸೊಂಕಿತರು ದೃಢಪಡುವುದರೊಂದಿಗೆ 880 ಸೊಂಕಿತರ ಸಂಖ್ಯೆ ಏರಿದೆ. ದೀರ್ಘ ಕಾಯಿಲೆಗ ಳಿಂದ ಬಳಲುತ್ತಿದ್ದ . 29 ಜನರು ಸರಿಯಾದ ಸಮ ಯಕ್ಕೆ ಬಾರದೇ ತಡವಾಗಿ ಬಂದ ಸಾವನ್ನಪ್ಪಿದ್ದಾರೆ. 409ಜನರು ಡಿಸ್ಚಾರ್ಜ್ ಆಗಿದ್ದು,442 ಸಕ್ರಿಯ ಪ್ರಕರಣಗಳಿವೆ ಎಂದು ಡಿಎಚ್‌ಒ ಡಾ.ಜನಾರ್ಧನ್ ಅವರು ಸಭೆಗೆ ವಿವರಿಸಿದರು.ಬಳ್ಳಾರಿ ಜಿಲ್ಲೆಯಲ್ಲಿ 16678 ಸ್ವ್ಯಾಬ್ ಸಂಗ್ರಹಿಸಿ ಪರೀಕ್ಷಿಸಲಾಗಿತ್ತು;ಅವರಲ್ಲಿ 880ಜನರಿಗೆ ಪಾಸಿಟಿವ್ ಬಂದಿದೆ ಎಂದರು.

ಬಳ್ಳಾರಿ–12,ಸಂಡೂರು–03,ಸಿರಗುಪ್ಪ–02, ಹೊಸಪೇಟೆ–05,ಅದೋನಿ–03,ಗಂಗಾವತಿ, ಚಿತ್ರದುರ್ಗ, ರಾಯದುರ್ಗ ಮತ್ತು ರಾಯಚೂರು ತಲಾ ಒಂದು ಸಾವನ್ನಪ್ಪಿದ್ದಾರೆ ಎಂದರು. 426 ಜಿಂದಾಲ್ ಸೊಂಕಿತರಿದ್ದಾರೆ ಎಂದು ವಿವರಿಸಿದರು.

ಪರಿಣಿತ ತಂಡದಿಂದ ಸಾವುಗಳ ಪರಿಶೀಲನೆ

ಬಳ್ಳಾರಿ ಜಿಲ್ಲೆಯಲ್ಲಿ ಸಾವಿನ ಪ್ರಮಾಣ ಹೆಚ್ಚಾಗಿರುವ ಹಿನ್ನೆಲೆ ಬೆಂಗಳೂರಿನ ಪರಿಣಿತ 4ಜನ ತಜ್ಞವೈದ್ಯರು ವಿಡಿಯೋ ಕಾನ್ಫರೆನ್ಸ್ ಮೂಲಕ 29ಸಾವುಗಳ ಪರಿಶೀಲನೆ ನಡೆಸಿದರು.ಈ ಸಾವನ್ನಪ್ಪಿದವರು ಯಾವ ಕಾಯಿಲೆಗಳಿಂದ ಬಳಲುತ್ತಿದ್ದರು;ಯಾವಾಗ ಆಸ್ಪತ್ರೆಗೆ ಬಂದಿದ್ದರು,ನೀಡಲಾದ ಚಿಕಿತ್ಸೆ ವಿವರ ಸೇರಿದಂತೆ ಅಗತ್ಯ ಮಾಹಿತಿಯನ್ನು ಪಡೆದುಕೊಂಡರು.

ಪರಿಣಿತರು ಸಹ ತಾವು ನೀಡಲಾದ ಚಿಕಿತ್ಸೆ ಸರಿಯಾಗಿಯೇ ಇದೆ;ಅವರು ಆಸ್ಪತ್ರೆಗೆ ಬರುವುದು ತಡವಾದ ಕಾರಣ ಈ ರೀತಿ ಸಾವಿಗೆ ಕದತಟ್ಟಿದ್ದಾರೆ ಎಂದು ವರದಿ ನೀಡಿದ್ದಾರೆ ಎಂದು ವಿಮ್ಸ್ ನಿರ್ದೇಶಕ ಡಾ.ದೇವಾನಂದ್ ಅವರು ಸಭೆಗೆ ವಿವರಿಸಿದರು.

ವಿವಿಧ ರೀತಿಯ ದೀರ್ಘಕಾಯಿಲೆಗಳಿಂದ ಬಳಲುತ್ತಿರುವವರೇ ಸಾವನ್ನಪ್ಪಿದ್ದಾರೆ ಎಂದು ಹೇಳಿದ ವಿಮ್ಸ್ ನಿರ್ದೇಶಕ ಡಾ.ದೇವಾನಂದ ಅವರು ಬಳ್ಳಾರಿಯಲ್ಲಿ 70ವಯಸ್ಸಿಗೂ ಮೇಲ್ಪಟ್ಟ ಹನ್ನೆರಡು ಜನ ಚಿಕಿತ್ಸೆ ಪಡೆದು (2ನೇ ಪುಟಕ್ಕೆ )